

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೇಂದ್ರ ಪುರಸ್ಕೃತ ಯೋಜನೆಯಾದ NAPS (National Apprenticeship Promotion Scheme) ಅನುಷ್ಠಾನಕ್ಕೆ ಸಂಬಂಧಿಸಿದಂತೆ Single Nodal Account ನ್ನು ಪ್ರಾರಂಭಿಸಲು ಅನುಮತಿ ನೀಡುವ ಕುರಿತು.

ಓದಲಾಗಿದೆ:
1. ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ಇವರ ಪತ್ರ ಸಂಖ್ಯೆ: ಕೈತಉ/ತರಬೇತಿ/ಶಿಶಿಕ್ಷು/NAPS-PFMS/ವಿವ-04/2021-22 ದಿನಾಂಕ: 15/07/2021.
2. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 5 ಟಿಎಆರ್ 2017, ದಿನಾಂಕ: 31.01.2017.
3. ಆರ್ಥಿಕ ಇಲಾಖೆ ಸುತ್ತೋಲೆ ಸಂಖ್ಯೆ: ಆಇ 30 ಟಿಎಆರ್ 2020, ದಿನಾಂಕ: 15.06.2021.

*******

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ (1) ರ ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ಇವರ ಪ್ರಸ್ತಾವನೆಯಲ್ಲಿ ಕೇಂದ್ರ ಪುರಸ್ಕೃತ ಯೋಜನೆಯಾದ NAPS (National Apprenticeship Promotion Scheme) ಕಾರ್ಯಕ್ರಮವನ್ನು ಇಲಾಖೆಯು ಅನುಷ್ಠಾನಗೊಳಿಸಿದ್ದು ಡಿಜಿಟಿ ದಿನಾಂಕ: 13/07/2021ರ ಪತ್ರದನುಸಾರ NAPS ಕಾರ್ಯಕ್ರಮವನ್ನು PFMS ನಲ್ಲಿ ನೋಂದಾಯಿಸಬೇಕಾಗಿರುತ್ತದೆ.

ಡಿಜಿಟಿ ನವದೆಹಲಿ ರವರ ದಿ: 13/07/2021ರ ಪತ್ರ ಹಾಗೂ ಆರ್ಥಿಕ ಇಲಾಖೆಯ ದಿನಾಂಕ: 15/06/2021ರ ಸುತ್ತೋಲೆ ಅನುಸಾರ ಪ್ರತಿಯೊಂದು CSS ಕಾರ್ಯಕ್ರಮಕ್ಕೆ ಪ್ರತ್ಯೇಕವಾದ Single Nodal Accountನ್ನು ತೆರೆಯುವುದು ಕಡ್ಡಾಯವಾಗಿರುತ್ತದೆ. ಆದುದರಿಂದ, NAPS ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇವರ ಹೆಸರಿನಲ್ಲಿ ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ Single Nodal ಖಾತೆಯನ್ನು ಪ್ರಾರಂಭಿಸಲು ಅನುಮತಿ ನೀಡುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ (2) ರ ಆದೇಶದಲ್ಲಿ ಆರ್ಥಿಕ ಇಲಾಖೆಯು ಬ್ಯಾಂಕ್ ಖಾತೆ ತೆರೆಯಲು ಮಾರ್ಗಸೂಚಿಗಳನ್ನು ನೀಡಿ ಆದೇಶಿಸಿದೆ.

ಮೇಲೆ ಓದಲಾದ ಕ್ರ.ಸಂ (3) ರ ಆರ್ಥಿಕ ಇಲಾಖೆಯ ಸುತ್ತೋಲೆಯಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳಿಗೆ ಸಂಬಂಧಿಸಿದಂತೆ ಯೋಜನೆಯನ್ನು ಜಾರಿಗೊಳಿಸುವ ಇಲಾಖೆಗಳು Single Nodal Agency (SNA) ನ್ನು ಗುರುತಿಸಿ ಆದೇಶ ಹೊರಡಿಸುವ ಹಾಗೂ ಹಣ ಬಿಡುಗಡೆ ಮಾಡಲು ಕಾರ್ಯವಿಧಾನವನ್ನು ರೂಪಿಸಿ ರಾಜ್ಯ ಮಟ್ಟದಲ್ಲಿ Single Nodal Agency (SNA) ಹೆಸರಿನಲ್ಲಿ ಬ್ಯಾಂಕ್ ಖಾತೆಯನ್ನು RBI ಗುರುತಿಸಿದ ಯಾವುದೇ ಷೆಡ್ಯೂಲ್ ಬ್ಯಾಂಕಿನಲ್ಲಿ ಬ್ಯಾಂಕ್ ಖಾತೆ ತೆರೆಯಲು ತಿಳಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೌಉಜೀಇ 52 ಕೈತಶಿ 2021, ಬೆಂಗಳೂರು, ದಿನಾಂಕ: 11/08/2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕೇಂದ್ರ ಪುರಸ್ಕೃತ ಯೋಜನೆಯಾದ NAPS (National Apprenticeship Promotion Scheme) ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕೇಂದ್ರ ಕಚೇರಿ, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯನ್ನು Single Nodal Agency ಎಂದು ಘೋಷಿಸಿ, ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇವರ ಹೆಸರಿನಲ್ಲಿ ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ Single Nodal ಖಾತೆಯನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ತೆರೆಯಲು ಅನುಮತಿ ನೀಡಿ ಆದೇಶಿಸಿದೆ.

**ಷರತ್ತು:-**

1. ಹೊಸ ಬ್ಯಾಂಕ್ ಖಾತೆಯನ್ನು ತೆರೆಯಲು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 5 ಟಿಎಆರ್ 2017, ದಿನಾಂಕ:31.01.2017 ರಲ್ಲಿ ನೀಡಿರುವ ಮಾರ್ಗಸೂಚಿಗಳನ್ನು ಹಾಗೂ ಸುತ್ತೋಲೆ ಸಂಖ್ಯೆ: ಆಇ 30 ಟಿಎಆರ್ 2020, ದಿನಾಂಕ:15.06.2021 ರಲ್ಲಿ ನೀಡಿರುವ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

2. ಈ ಯೋಜನೆಗೆ ಬಿಡುಗಡೆಯಾದ ಅನುದಾನ ಕುರಿತು ಮಾಸಿಕವಾಗಿ ಬಳಕೆ ಪ್ರಮಾಣ ಪತ್ರದೊಂದಿಗೆ ವರದಿಯನ್ನು ಸಲ್ಲಿಸುವುದು.

3. ಯೋಜನೆಯು ಮುಕ್ತಾಯದ ನಂತರ ವಿಶೇಷ ಪ್ಯಾಕೇಜ್ ರಡಿ ತೆರೆಯಲಾದ ಬ್ಯಾಂಕ್ ಖಾತೆಯನ್ನು ಮುಕ್ತಾಯಗೊಳಿಸುವುದು ಹಾಗೂ ಉಳಿಕೆ ಅನುದಾನ ಹಾಗೂ ಬಡ್ಡಿ ಮೊತ್ತವನ್ನು ಸರ್ಕಾರಕ್ಕೆ ಹಿಂದಿರುಗಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

11/08/2021

(ರಂಗನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ.

11/08/2021

**ಇವರಿಗೆ:-**

1. ಮಹಾಲೇಖಪಾಲರು (ಎ&ಇ), (ಜಿ&ಎಸ್.ಎಸ್.ಎ), (ಇ&ಆರ್.ಎಸ್.ಎ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ (ಆಯವ್ಯಯ ಮತ್ತು ಸಂಪನ್ಮೂಲ), ಆರ್ಥಿಕ ಇಲಾಖೆ. ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ (ಆಯವ್ಯಯ ಮತ್ತು ಸಂಪನ್ಮೂಲ), ಆರ್ಥಿಕ ಇಲಾಖೆ. ವಿಧಾನ ಸೌಧ, ಬೆಂಗಳೂರು.

4. ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯ, ಬೆಂಗಳೂರು.
5. ಜಂಟಿ ನಿರ್ದೇಶಕರು (ಉದ್ಯೋಗ), ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಬೆಂಗಳೂರು.
6. ಖಜಾನಾಧಿಕಾರಿ, ರಾಜ್ಯಹುಜೂರ್ ಖಜಾನೆ, ಬೆಂಗಳೂರು.
7. ಉಪ ನಿರ್ದೇಶಕರು, ಖಜಾನೆ ಎಸ್.ಎಂ.ಸಿ., ಖನಿಜ ಭವನ, ರೇಸ್‌ಕೋರ್ಸ್ ರೋಡ್, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3&9), ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಗ್ರೇಡ್-2), ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ & ಜೀವನೋಪಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
10. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ & ಜೀವನೋಪಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
11. ಸರ್ಕಾರದ ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ & ಜೀವನೋಪಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.